ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದ ಸಹಕಾರಿ ಬ್ಯಾಂಕ್‌ಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

927(1101) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಕಾನೂನಿನ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರಿ ಬ್ಯಾಂಕುಗಳಲ್ಲಿ ಇತ್ತೀಚೆಗೆ ಹಲವಾರು ವಂಚನೆ ಪ್ರಕರಣಗಳು ನಡೆಯುತ್ತಿದ್ದು. ಇದರ ನಿಯಂತ್ರಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಕರ್ನಾಟಕ ಸಹಕಾರಿ ಕಾಯಿದೆಯನ್ವಯ ಸ್ಥಾಪಿಸಿದ ಒಟ್ಟು ಬ್ಯಾಂಕುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಒಟ್ಟು ನೋಂದಣಿಯಾದ ಬ್ಯಾಂಕುಗಳಲ್ಲಿ ಲಾಭದಾಯಕವಾಗಿ ನಡೆಯುತ್ತಿರುವ ಹಾಗೂ ನಷ್ಟದಲ್ಲಿ ನಡೆಯುತ್ತಿರುವ ಬ್ಯಾಂಕುಗಳ ಪ್ರತ್ಯೇಕ ಜಿಲ್ಲಾವಾರು ವಿವರವಾದ ಮಾಹಿತಿಯನ್ನು ನೀಡುವುದು;

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಕಾಯಿದೆಯಡಿ ನೋಂದಾಯಿತವಾದ ಎಷ್ಟು ಬ್ಯಾಂಕುಗಳಲ್ಲಿ ವಂಚನೆ ಪ್ರಕರಣಗಳು ನಡೆದಿವೆ ಹಾಗೂ ಅವುಗಳ ತನಿಖೆ ಯಾವ ಹಂತದಲ್ಲಿವೆ ? (ವಿವರ ನೀಡುವುದು)